ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಸಭೆ ಸಚಿವಾಲಯ

ಪತ್ರಿಕೆಯ ಹೆಸರು : NAME OF THE NEWS PAPER : ಪ್ರಜಾವಾಣಿ    ದಿನಾಂಕ : DATE : 20/08/2019

# ಮೂರ್ತಿ ಅಮಾನತು ವಿವಾದ ದಾಖಲೆ ಸಲ್ಲಿಸಲು ನಿರ್ದೇಶನ

ಬೆಂಗಳೂರು: ವಿಧಾನಸಭೆ ಕಾರ್ಯದರ್ಶಿ ಹುದ್ದೆಯಿಂದ ಎಸ್.ಮೂರ್ತಿ ಅವರನ್ನು ಅಮಾನತುಗೊಳಿಸಿರುವ ನಿರ್ಣಯಕ್ಕೆ ಸಂಬಂದಿಸಿದಂತೆ ವಿಧಾನಸಭೆಯ ವಿಶೇಷ ಮಂಡಳಿ ನಡೆಸಿರುವ ಸಭೆಯ ಸಮಸ್ತ ವಿವರಗಳನ್ನು ಒದಗಿಸುವಂತೆ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶಿಸಿದೆ.

'ವಿಧಾನಸಭೆ ಕಾರ್ಯದರ್ಶಿ ಹುದ್ದೆಯಿಂದ ನನ್ನನ್ನು ಅಮಾನತುಗೊಳಿಸಿ ವಿಧಾನಸಭೆ ವಿಶೇಷ ಮಂಡಳಿ ಹೊರಡಿಸಿರುವ ಆದೇಶಕ್ಕೆ ತಡೆ ನೀಡಬೇಕು' ಎಂಬ ಎಸ್.ಮೂರ್ತಿ ಅವರ ಕೋರಿಕೆಯನ್ನು ಏಕಸದಸ್ಯ ನ್ಯಾಯಪೀಠ ತಿರಸ್ಕರಿಸಿತ್ತು.

ಈ ಆದೇಶ ಪ್ರಶ್ನಿಸಿ ಸಲ್ಲಿಸಲಾಗಿರುವ ಮೇಲ್ಮನವಿಯನ್ನು ಮುಖ್ಯ ನ್ಯಾಯಮೂರ್ತಿ ಅಭಯ್ ಎಸ್.ಓಕಾ ನೇತೃತ್ವದ ವಿಭಾಗೀಯ ನ್ಯಾಯಪೀಠ ಸೋಮವಾರ ವಿಚಾರಣೆ ನಡೆಸಿತು. ವಿಚಾರಣೆ ವೇಳೆ ಮೂರ್ತಿ ಪರ ವಾದ ಮಂಡಿಸಿದ ಹಿರಿಯ ವಕೀಲ ಎ.ಎಸ್.ಪೊನ್ನಣ್ಣ, 'ವಿಧಾನಸಭಾಧ್ಯಕ್ಷರು ತಮ್ಮ ವಿವೇಚನೆ ಅಡಿಯಲ್ಲಿ ಅಮಾನತು ಆದೇಶ ಹೊರಡಿಸಿದ್ದಾರೆ. ಅರ್ಜಿದಾರರ ಅಹವಾಲು ಆಲಿಸಿಲ್ಲ. ಆದ್ದರಿಂದ ಮೂರ್ತಿ ಅವರ ಅಮಾನತು ಆದೇಶ ರದ್ದುಗೊಳಿಸಬೇಕು' ಎಂದು ಕೋರಿದರು.

ಇದಕ್ಕೆ ಸರ್ಕಾರದ ಪರ ವಕೀಲ ತಾರಾನಾಥ ಪೂಜಾರಿ ಅವರು, 'ಅಮಾನತು ವಿಷಯಕ್ಕೆ ಸಂಬಂಧಿಸಿದಂತೆ ವಿಧಾನಸಭಾಧ್ಯಕ್ಷರು ಸಲಹಾ ಸಮಿತಿ ಮುಂದೆ ಪ್ರಸ್ತಾವನೆ ಮಂಡಿಸಿದ್ದರು ಮತ್ತು ಅದರನ್ವಯವೇ ಅಧೀನ ಕಾರ್ಯದರ್ಶಿ ಆದೇಶ ಕಾರ್ಯಗತಗೊಳಿಸಿದ್ದಾರೆ. ಎಲ್ಲ ಪ್ರಕ್ರಿಯೆ ಕಾನೂನು ಬದ್ಧವಾಗಿಯೇ ಇದೆ' ಎಂದು ಪ್ರತಿಪಾದಿಸಿದರು.

ಇದನ್ನು ಆಲಿಸಿದ ನ್ಯಾಯಪೀಠ, 'ವಿಧಾನ ಸಭಾಧ್ಯಕ್ಷರು ಸಭೆ ಕರೆದಿದ್ದ ದಿನಾಂಕ, ಸಭೆಯ ನಡಾವಳಿಗಳು, ಸಭೆಯಲ್ಲಿ ಹಾಜರಿದ್ದವರು ಯಾರು ಮತ್ತು ಸಭೆಯ ಠರಾವು ಏನಿತ್ತು ಎಂಬುದರ ದಾಖಲಾತಿಗಳನ್ನು ಸೆಪ್ಟೆಂಬರ್ 4ರ ಒಳಗೆ ಸಲ್ಲಿಸಿ' ಎಂದು ನಿರ್ದೇಶಿಸಿತು. ವಿಚಾರಣೆಯನ್ನು ಸೆಪ್ಟೆಂಬರ್ 4ಕ್ಕೆ ಮುಂದೂಡಲಾಗಿದೆ.

**ಪ್ರಕರಣವೇನು?:** ವಿಧಾನಸಭೆ ಕಾರ್ಯದರ್ಶಿಯಾಗಿದ್ದ ಎಸ್. ಮೂರ್ತಿಯವರನ್ನು 2018ರ ಡಿಸೆಂಬರ್ 27ರಂದು ಸೇವೆಯಿಂದ ಅಮಾನತುಗೊಳಿಸಿ ಆದೇಶ ಹೊರಡಿಸಲಾಗಿತ್ತು. '2016 ಹಾಗೂ 2017ನೇ ಸಾಲಿನಲ್ಲಿ ಬೆಳಗಾವಿಯ ಸುವರ್ಣಸೌಧದಲ್ಲಿ ನಡೆದ ಅಧಿವೇಶನಕ್ಕೆ ಸಂಬಂಧಿಸಿದಂತೆ ಕೈಗೊಳ್ಳಲಾದ ಕಾಮಗಾರಿ ಹಾಗೂ ಇತರೆ ಖರ್ಚು ವೆಚ್ಚಗಳಲ್ಲಿ ಅವ್ಯವಹಾರ ನಡೆಸಲಾಗಿದೆ' ಎಂಬ ಆರೋಪಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಅಧ್ಯಕ್ಷತೆಯಲ್ಲಿರುವ ವಿಶೇಷ ಮಂಡಳಿಯ ಆದೇಶದ ಅನ್ವಯ ಮೂರ್ತಿ ಅವರನ್ನು ಸೇವೆಯಿಂದ ಅಮಾನತುಗೊಳಿಸಲಾಗಿತ್ತು.